ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ**

ಸ್ವಚ್ಛ ಭಾರತ

ಒಂದು ಹೆಜ್ಜೆ ಸ್ವಚ್ಛತೆಯ ಕಡೆಗೆ

# ಮಂಗಳೂರಿನಲ್ಲಿ ಪ್ಲಾಸ್ಟಿಕ್ ತ್ಯಾಜ್ಯದಿಂದ ತಯಾರಾಯ್ತು ಸುಂದರ ರಸ್ತೆ!

**ಕೋಟ್ಯಂತರ ರೂಪಾಯಿ ಸುರಿದರೂ ಮಹಾನಗರಗಳಲ್ಲಿ ಪರಿಹಾರ ಕಾಣದ ಕಸ ವಿಲೇವಾರಿ ಸಮಸ್ಯೆಗೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅರ್ಥಪೂರ್ಣ ಉತ್ತರ ಕಂಡುಕೊಳ್ಳಲಾಗಿದೆ. ಎಂಆರ್‌ಎಫ್ ಘಟಕಗಳಲ್ಲಿ ಸಂಗ್ರಹವಾದ ಪ್ಲಾಸ್ಟಿಕ್ ತ್ಯಾಜ್ಯ ಬಳಸಿ ರಸ್ತೆ ನಿರ್ಮಾಣ ಮಾಡುವ ಮೂಲಕ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವು ವಿನೂತನ ಪ್ರಯೋಗ ನಡೆಸಿ ಯಶಸ್ವಿಯಾಗಿದೆ.**

ಪ್ಲಾಸ್ಟಿಕ್ ತ್ಯಾಜ್ಯದ ಸಮರ್ಪಕ ವಿಲೇವಾರಿ ಕೇವಲ ಕರ್ನಾಟಕ, ಅಥವಾ ಭಾರತದ ಸಮಸ್ಯೆಯಲ್ಲ. ಇದು ಇಡೀ ಜಾಗತಿಕ ಮಟ್ಟದಲ್ಲೆ ಅತೀ ದೊಡ್ಡ ಸಮಸ್ಯೆಯಾಗಿ ಕಾಡುತ್ತಿದೆ. ಪರಿಸರಕ್ಕೆ ಮಾರಕವಾದ ಪ್ಲಾಸ್ಟಿಕ್ ಅನ್ನು ನಾವು ಜೀವನದ ಅವಿಭಾಜ್ಯ ಅಂಗ ಎನ್ನುವಂತೆ ಅತಿಯಾಗಿ ಬಳಸುತ್ತಿದ್ದೇವೆ. ಆದ್ರೆ ಇದರಿಂದ ಸಕಲ ಜೀವ ಸಂಕುಲವೂ ಅಪಾಯದ ಅಂಚಿನಲ್ಲಿದೆ. ಈ ಮಧ್ಯೆ ಸರ್ಕಾರದಿಂದ ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ ಕಸ ಮುಕ್ತ ಭಾರತ ನಿರ್ಮಿಸಲು, ಪ್ಲಾಸ್ಟಿಕ್ ನಿರ್ಮೂಲನೆ ಹಾಗೂ ಉತ್ಪತ್ತಿಯನ್ನು ತಗ್ಗಿಸುವ ಪ್ರಯೋಗಾತ್ಮಕ ಪ್ರಯತ್ನಗಳು ನಡೆಯುತ್ತಿವೆ. ಹೀಗಿರುವಾಗಲೇ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ಲಾಸ್ಟಿಕ್ ತ್ಯಾಜ್ಯವನ್ನು ಬಳಸಿ ರಸ್ತೆ ನಿರ್ಮಾಣ ಮಾಡಿರುವುದು ಪ್ಲಾಸ್ಟಿಕ್ ತ್ಯಾಜ್ಯದ ಮರುಬಳಕೆಗೆ ಮತ್ತೊಂದು ದಾರಿ ಸಿಕ್ಕಂತಾಗಿದೆ.



## ಕರ್ನಾಟಕದಲ್ಲೇ ಮೊದಲ ಪ್ರಯತ್ನ!

ಎಸೆದ ಕಲ್ಲನ್ನು ಬಳಸಿ ಸೇತುವೆ ಮಾಡು ಎನ್ನುವ ಗಾದೆಯ ಹಾಗೆ ಪ್ಲಾಸ್ಟಿಕ್ ತ್ಯಾಜ್ಯವನ್ನು ಬಳಸಿಕೊಂಡು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸುಂದರ ರಸ್ತೆ ನಿರ್ಮಿಸಲಾಗಿದ್ದು, ಇದು ರಾಜ್ಯದಲ್ಲೇ ಮೊದಲ ಪ್ರಯತ್ನವಾಗಿದೆ. **170 ಟನ್ ಪ್ಲಾಸ್ಟಿಕ್ ತ್ಯಾಜ್ಯ ಬಳಸಿ 50 ಕಿ.ಮೀ ಉದ್ದದ ಸರ್ವೀಸ್ ರಸ್ತೆ ನಿರ್ಮಾಣ ಮಾಡಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ವಿನೂತನ ಪ್ರಯೋಗದಲ್ಲಿ ಯಶಸ್ವಿಯಾಗಿದೆ.** ರಾಷ್ಟ್ರೀಯ ಹೆದ್ದಾರಿ 66ರ ಪಕ್ಕದಲ್ಲಿ ತಲಪಾಡಿಯಿಂದ ನಂತೂರುವರೆಗೆ ಹಾಗೂ ಸುರತ್ಕಲ್‌ನಿಂದ ಸಾಸ್ತಾನದವರೆಗೆ ನಿರ್ಮಾಣ ಮಾಡಿರುವ ರಸ್ತೆಗೆ ಎಂಆರ್ ಎಫ್‌ನಲ್ಲಿ ಸಂಗ್ರಹಿಸಿದ ಕಡಿಮೆ ಸಾಂದ್ರತೆಯ ಪಾಲಿಥಿಲೀನ್ ಅನ್ನು ಬಳಕೆ ಮಾಡಲಾಗಿದೆ.

# ಪ್ಲಾಸ್ಟಿಕ್ ರಸ್ತೆ ನಿರ್ಮಾಣಕ್ಕೆ ಎಂಆರ್‌ಎಫ್ ಘಟಕಗಳು ಸಾಥ್!

ದಕ್ಷಿಣ ಕನ್ನಡ ಜಿಲ್ಲೆಯ ವಿವಿಧ ಗ್ರಾಮ ಪಂಚಾಯತ್ ವ್ಯಾಪ್ತಿಯಿಂದ ಸಂಗ್ರಹಿಸಿದ ಒಣ ತ್ಯಾಜ್ಯವನ್ನು ಎಂಆರ್ ಎಫ್ ಘಟಕಗಳ ಮೂಲಕ ನಿರ್ವಹಣೆ ಮಾಡಲಾಗುತ್ತದೆ. ಕಾರ್ಕಳ, ಎಡಪದವು, ಬಂಟ್ವಾಳ ಮತ್ತು ಕೆದಂಬಾಡಿಯಲ್ಲಿರುವ ಸಮಗ್ರ ಘನ ತ್ಯಾಜ್ಯ ನಿರ್ವಹಣಾ ಘಟಕ(ಎಂಆರ್‌ಎಫ್) ಗಳಲ್ಲಿ ಪ್ರತಿದಿನ 18-20 ಟನ್ ಒಣ ತ್ಯಾಜ್ಯವನ್ನು ಸಂಸ್ಕರಿಸಲಾಗುತ್ತದೆ. ಈ ಘಟಕಗಳಲ್ಲಿ ನಿರ್ವಹಣೆ ಮಾಡಲಾದ 170 ಟನ್ ಪ್ಲಾಸ್ಟಿಕ್ ಬಳಸಿ ಇದೀಗ 50 ಕಿ.ಮೀ ಉದ್ದದ ಅಂದದ ರಸ್ತೆ ನಿರ್ಮಿಸಲಾಗಿದೆ.





# ಮಳೆಗಾಲಕ್ಕೂ ಮಿಸುಕೊಲ್ಲ ಈ ಪ್ಲಾಸ್ಟಿಕ್ ರಸ್ತೆ!

ಮಳೆ ಅಧಿಕವಿರುವ ಪ್ರದೇಶಗಳಲ್ಲಿ ಡಾಂಬರ್ ರಸ್ತೆಯಲ್ಲಿ ಹೊಂಡಗುಂಡಿಗಳು ಬೇಗ ಸೃಷ್ಟಿಯಾಗುತ್ತದೆ. ಇದಕ್ಕೆ ಪರಿಹಾರ ಕಂಡುಕೊಳ್ಳಲು ಎನ್‌ಎಚ್ ಮಂಗಳೂರು ಕಚೇರಿಯ ಯೋಜನಾ ನಿರ್ದೇಶಕರು ಹೆದ್ದಾರಿ ಪ್ರಾಧಿಕಾರಕ್ಕೆ ಪರ್ಯಾಯ ವ್ಯವಸ್ಥೆಗೆ ವರದಿ ಸಲ್ಲಿಸಿದ್ದರು. ಇದನ್ನು ಪರಿಶೀಲಿಸಿದ ಇಂಡಿಯನ್ ರೋಡ್ ಕಾಂಗ್ರೆಸ್(ಐಆರ್‌ಸಿ) ದಕ್ಷಿಣ ಕನ್ನಡ ಜಿಲ್ಲೆಯ ಸರ್ವೀಸ್ ರಸ್ತೆ ನಿರ್ಮಾಣಕ್ಕೆ ಕಡಿಮೆ ಸಾಂದ್ರತೆಯ ಪಾಲಿಥಿನ್ ಬಳಸುವಂತೆ ಅನುಮತಿ ನೀಡಿದೆ. ಇದು ರಸ್ತೆಯ ಗಟ್ಟಿತನವನ್ನು ಹೆಚ್ಚಿಸಿ ಬಾಳಿಕೆಯನ್ನು ದೀರ್ಘಗೊಳಿಸುತ್ತದೆ. ಜೊತೆಗೆ ಪ್ಲಾಸ್ಟಿಕ್ ತ್ಯಾಜ್ಯದ ನಿರ್ವಹಣೆಗೆ ನವೀನ ಹಾಗೂ ಪರಿಸರಸ್ನೇಹಿ ಪರಿಹಾರ ಒದಗಿಸಿದಂತಾಗಿದೆ.

# ಕ್ಯಾರಿ ಬ್ಯಾಗ್ ನಿಂದ ತಯಾರಾಯ್ತು ಕಾರು ಓಡಾಡೋ ರೋಡು!

ದಕ್ಷಿಣ ಕನ್ನಡ ಜಿಲ್ಲೆಯ 4 ಕಡೆಗಳಲ್ಲಿ ಶೂನ್ಯ ನಿರ್ವಹಣಾ ವೆಚ್ಚದ ಮಾದರಿಯಲ್ಲಿ ಸಮಗ್ರ ಎಂಆರ್‌ಎಫ್ ಘಟಕವನ್ನು ನಿರ್ವಹಿಸುತ್ತಿರುವ ಮಂಗಳಾ ರಿಸೋರ್ಸಸ್ ಮ್ಯಾನೇಜ್‌ಮೆಂಟ್‌ಗೆ ಹೆದ್ದಾರಿ ಕಾಮಗಾರಿ ನಿರ್ಮಿಸಿರುವ ಇನ್ನಾ ಎಂಬ ಉಪಗುತ್ತಿಗೆದಾರ ಕಂಪೆನಿ ಎಲ್‌ಡಿಪಿಇಗೆ ಬೇಡಿಕೆ ಸಲ್ಲಿಸಿತ್ತು. ಜನವರಿಯಿಂದ ಮೇ ನಡುವೆ ಸಂಗ್ರಹಿಸಿರುವ ಘನತ್ಯಾಜ್ಯದಲ್ಲಿ, 170 ಟನ್‌ನಷ್ಟು ಕ್ಯಾರಿಬ್ಯಾಗ್, ಪ್ಯಾಕೇಜಿಂಗ್ ಕವರ್‌ಗಳನ್ನು ರಸ್ತೆ ನಿರ್ಮಾಣಕ್ಕೆ ನೀಡಲಾಗಿದೆ.





**ಒಟ್ಟಿನಲ್ಲಿ ಪ್ಲಾಸ್ಟಿಕ್ ಮರುಬಳಕೆಯೊಂದಿಗೆ ರಸ್ತೆ ನಿರ್ಮಾಣದ ವಿನೂತನ ಪ್ರಯೋಗ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಯಶಸ್ವಿಯಾಗಿದ್ದು, ರಾಜ್ಯಕ್ಕೆ ಮಾದರಿಯಾಗಿದೆ.**